ಸಿ.ಸಿ. ನಂ. 274/2024

ಸಿ.ಡಬ್ಲ್ಯು: 01(ಮಹಾಂತೇಶ)

ದಿನಾಂಕಃ 14.05.2025 ರಂದು ಮುಖ್ಯವಿಚಾರಣೆಯನ್ನು ಪಡೆದುಕೊಳ್ಳಲು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

<u>ಸಾಕ್ಷಿಯ ಮುಖ್ಯವಿಚಾರಣೆ ಶ್ರೀ ಎ ಎಂ ಆರ್ ವಕೀಲರಿಂದಃ-</u>

ಇಂದು ನಾನು ನನ್ನ ಮುಖ್ಯವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ತಿಳಿದುಕೊಂಡು ನಾನು ನನ್ನ ಸಹಿ ಮಾಡಿದ್ದೇನೆ.

ಈ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಮಾನ್ಯ ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದು, ಸದರಿ ದಾಖಲೆಗಳ ವಿವರ ಈ ಕೆಳಗಿನಂತಿವೆ.

1. ಆರೋಪಿಯು ನೀಡಿದ ರೂ.2,00,000/- ಮೊತ್ತದ ದಿಃ 14.03.2024 ರ 782989 ರ ಸಂಖ್ಯೆಯುಳ್ಳ ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿಪಿ 01 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ 01 ರಲ್ಲಿರುವ ಆರೋಪಿಯ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ 01(ಎ) ಎಂದು ಗುರುತಿಸಲಾಯಿತು.

2. ಎಸ್ ಬಿ ಐ ಬ್ಯಾಂಕಿನವರು Funds insufficient ಎಂದು ನೀಡಿದ ಹಿಂಬರಹವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ 02 ಎಂದು ಗುರುತಿಸಲಾಯಿತು.

3. ಲೀಗಲ್ ನೋಟಿಸ್‌ನ್ನು ಹಾಜರುಪಡಿಸಿದ್ದು ಅದನ್ನು ನಿಪಿ 03 ಎಂದು ಗುರುತಿಸಲಾಯಿತು.

4. ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 04 ಎಂದು ಗುರುತಿಸಲಾಯಿತು.

5. ಅಂಚೆ ಕಚೇರಿಯ Track consignment ಹಾಜರುಪಡಿಸಿದ್ದು ಅದನ್ನು ನಿಪಿ 05 ಎಂದು ಗುರುತಿಸಲಾಯಿತು.

ಮುಖ್ಯ ವಿಚಾರಣೆ ಮುಕ್ತಾಯ.

ಆರೋಪಿ ಪರ ವಕೀಲರ ಕೋರಿಕೆಯ ಮೇರೆಗೆ ಸಾಕ್ಷಿಯ ಪಾಟೀಸವಾಲನ್ನು ಮುಂದೂಡಲಾಯಿತು.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,

ಕೂಡ್ಲಿಗಿ.